ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮೀನುಗಾರರ ರಕ್ಷಣೆ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

1020 (1220) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಉತ್ತರ ಕನ್ನಡ ಜಿಲ್ಲೆ, ಅಂಕೋಲಾದಲ್ಲಿನ ಬೇಲೇಕೇರಿ ಬಂದರು ಪ್ರದೇಶದಲ್ಲಿ ನಿರ್ವಹಣೆ ಕೊರತೆಯಿಂದಾಗಿ ಪ್ಲಾಟ್‌ಫಾರ್ಮ್ ಇಲ್ಲದೆ ಮಹಿಳೆಯರು ಮೀನು ಒಣಗಿಸಲಾಗದೆ ಪ್ರತಿನಿತ್ಯ ಬವಣೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಬಂದರು ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಲಾಕ್‌ಡೌನ್ ಸಮಯದಲ್ಲಿ ಮೀನುಗಾರರ ರಕ್ಷಣೆ ಮಾಡಬೇಕಾದದ್ದು ಸರ್ಕಾರದ ಕರ್ತವ್ಯವಲ್ಲವೇ; ಅವರ ಜೀವನ ನಿರ್ವಹಣೆಗೆ ಸರ್ಕಾರದ ಮಟ್ಟದಲ್ಲಿ ಕೈಗೊಂಡ ಕ್ರಮಗಳೇನು;

(ಈ) ಮೀನುಗಾರರು ಈ ಕ್ಲಿಷ್ಟಕರ ಸನ್ನಿವೇಶವಾದ ಕೋವಿಡ್-19 ಸಮಯದಲ್ಲಿ ಉದ್ಯೋಗವಿಲ್ಲದೆ ಕಷ್ಟಪಡುತ್ತಿದ್ದು, ಇವರಿಗೆ ಉದ್ಯೋಗ ಭದ್ರತೆ ನೀಡುವಲ್ಲಿ ಸರ್ಕಾರವು ಹೆಜ್ಜೆ ಇಟ್ಟಿದೆಯೇ; ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಂಡಿದೆ? (ಪೂರ್ಣ ಮಾಹಿತಿ ನೀಡುವುದು)